# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ಜಂಟಿ ನಿರ್ದೇಶಕರು (ನಗರ ಯೋಜನೆ – ಉತ್ತರ) ರವರ ಕಛೇರಿ, ಎನ್.ಆರ್.ಚೌಕ, ಬೆಂಗಳೂರು – 560 002**

ಸಂಖ್ಯೆ: BBMP/Addl.Dir/JD NORTH/0065/2019-20 ದಿನಾಂಕ: 04/02/2021

## ಪ್ರಾರಂಭಿಕ ಪ್ರಮಾಣಪತ್ರ

ವಿಷಯ: ಆಸ್ತಿ ಖಾತಾ ಸಂಖ್ಯೆ: 05, ಸರ್ವೆ ನಂ. 586, ಕಲ್ಕೆರೆ ಗ್ರಾಮ, ಕೆ.ಆರ್.ಪುರಂ ಹೋಬಳಿ, ಬೆಂಗಳೂರು ಪೂರ್ವ ತಾಲ್ಲೂಕು, ವಾರ್ಡ್ ಸಂಖ್ಯೆ: 26, ಮಹದೇವಪುರ ವಲಯ, ಬೆಂಗಳೂರು ಇಲ್ಲಿನ ಸ್ವತ್ತಿನಲ್ಲಿ ನಿರ್ಮಿಸುತ್ತಿರುವ ವಸತಿ ಸಮುಚ್ಚಯ ಕಟ್ಟಡಕ್ಕೆ ಪ್ರಾರಂಭಿಕ ಪ್ರಮಾಣಪತ್ರ ನೀಡುವ ಬಗ್ಗೆ.

**ಉಲ್ಲೇಖ:** 1) ನಕ್ಷೆ ಮಂಜೂರಾತಿ ಸಂಖ್ಯೆ: BBMP/Addl.Dir/JDNORTH/0065/2019-20 ರಂತೆ ದಿನಾಂಕ: 14-08-2020.

2) ತಮ್ಮ ಮನವಿ ಪತ್ರ ದಿನಾಂಕ: 9-09-2020.

* * * * * * *

ಆಸ್ತಿ ಖಾತಾ ಸಂಖ್ಯೆ: 05, ಸರ್ವೆ ನಂ. 586, ಕಲ್ಕೆರೆ ಗ್ರಾಮ, ಕೆ.ಆರ್.ಪುರಂ ಹೋಬಳಿ, ಬೆಂಗಳೂರು ಪೂರ್ವ ತಾಲ್ಲೂಕು, ವಾರ್ಡ್ ಸಂಖ್ಯೆ: 26, ಮಹದೇವಪುರ ವಲಯ, ಬೆಂಗಳೂರು ರ ಸ್ವತ್ತಿನಲ್ಲಿ ತಳ + ನೆಲ + ಮೇಲಿನ 04 ಅಂತಸ್ತುಗಳಲ್ಲಿ 54 ಘಟಕಗಳುಳ್ಳ ವಸತಿ ಸಮುಚ್ಚಯ ಕಟ್ಟಡ ನಿರ್ಮಿಸಲು ಉಲ್ಲೇಖ (1) ರಂತೆ ಈ ಕಛೇರಿಯಿಂದ ನಕ್ಷೆ ಮಂಜೂರಾತಿಯನ್ನು ನೀಡಲಾಗಿರುತ್ತದೆ. ಸದರಿ ವಸತಿ ಸಮುಚ್ಚಯ ಕಟ್ಟಡಕ್ಕೆ ಪ್ರಾರಂಭಿಕ ಪ್ರಮಾಣಪತ್ರ ನೀಡಲು ಉಲ್ಲೇಖ (2) ರಲ್ಲಿ ಕೋರಿರುವುದಕ್ಕೆ ಸಂಬಂಧಿಸಿದಂತೆ, ಕಟ್ಟಡ ನಿರ್ಮಾಣದ ಸ್ಥಳವನ್ನು ಪರಿಶೀಲಿಸಲಾಗಿ, ಮಂಜೂರಾತಿ ನಕ್ಷೆಯನ್ವಯ ಕಟ್ಟಡ ನಿರ್ಮಿಸುತ್ತಿರುವುದನ್ನು ಪರಿವೀಕ್ಷಿಸಲಾಗಿದೆ.

ಅಪರ ನಿರ್ದೇಶಕರು (ನಗರ ಯೋಜನೆ) ರವರು ಪ್ರಾರಂಭಿಕ ಪ್ರಮಾಣಪತ್ರ ನೀಡುವ ಪ್ರಸ್ತಾವನೆಗೆ ದಿನಾಂಕ: 05–11–2020 ರಂದು ಅನುಮೋದನೆ ನೀಡಿರುತ್ತಾರೆ. ಸದರಿ ಕಟ್ಟಡಕ್ಕೆ ಪ್ರಾರಂಭಿಕ ಪ್ರಮಾಣಪತ್ರ ನೀಡುವ ಸಂಬಂಧ ಪ್ರಾರಂಭಿಕ ಪ್ರಮಾಣಪತ್ರ ಶುಲ್ಕ ರೂ. 2,17,000/- ಗಳಿಗೆ ಡಿ.ಡಿಯನ್ನು ಸಲ್ಲಿಸಿ ಈ ಕಛೇರಿಯ ರಶೀದಿ ಸಂಖ್ಯೆ: RE-ifms 331-TP/000213 ದಿನಾಂಕ: 20-11-2020 ರಂದು ಸಂದಾಯ ಮಾಡಿರುವುದರಿಂದ, ಸದರಿ ವಸತಿ ಸಮುಚ್ಚಯ ಕಟ್ಟಡಕ್ಕೆ ಈ ಕೆಳಕಂಡ ಷರತ್ತುಗಳಿಗೆ ಒಳಪಡಿಸಿ ಪ್ರಾರಂಭಿಕ ಪ್ರಮಾಣಪತ್ರವನ್ನು ನೀಡಲಾಗಿದೆ.

**ಷರತ್ತುಗಳು**

1. ಕಟ್ಟಡದ ಕಾಮಗಾರಿಯನ್ನು ಮಂಜೂರಾತಿ ನಕ್ಷೆಯಂತೆ ನಿಯಮಾನುಸಾರ ನಿರ್ಮಿಸತಕ್ಕದ್ದು.
2. ಕಟ್ಟಡ ನಿರ್ಮಾಣದ ಸ್ಥಳದಲ್ಲಿ ಅಕ್ಕ–ಪಕ್ಕದವರಿಗೆ ಯಾವುದೇ ರೀತಿಯ ತೊಂದರೆಯಾಗದಂತೆ, ವಾಹನ ಸಂಚಾರಕ್ಕೆ ಅಡಚಣೆಯಾಗದಂತೆ, ಯಾವುದೇ ಅಪಘಾತ ಆಗದಂತೆ ಕಟ್ಟಡ ನಿರ್ಮಾಣ ಕೈಗೊಳ್ಳುವುದು ಹಾಗೂ ಕೆಲಸಗಾರರಿಗಾಗಿ ಶೆಡ್ ಮತ್ತು ತಾತ್ಕಾಲಿಕ ಶೌಚಾಲಯಗಳನ್ನು ನಿರ್ಮಿಸತಕ್ಕದ್ದು.
3. ನಕ್ಷೆ ಮಂಜೂರಾತಿಯ ಸಿಂಧುತ್ವವು ಉಲ್ಲೇಖ (1) ರಂತೆ ಅನುಮೋದನೆ ನೀಡಿದ ದಿನಾಂಕದಿಂದ 5 ವರ್ಷಗಳ ಅವಧಿಗೆ ಮಾನ್ಯತೆ ಹೊಂದಿದ್ದು, ಈ ಅವಧಿಯೊಳಗೆ ನಿರ್ಮಾಣ ಕಾರ್ಯವನ್ನು ಪೂರ್ಣಗೊಳಿಸಿ ಸ್ವಾಧೀನಾನುಭವ ಪ್ರಮಾಣಪತ್ರವನ್ನು ಪಡೆಯತಕ್ಕದ್ದು.
4. ಕಟ್ಟಡ ನಿರ್ಮಾಣದ ಪ್ರಗತಿಯನ್ನು ಕಾಲಾನುಸಾರ ಸಂಬಂಧಪಟ್ಟ ಇಂಜಿನಿಯರಿಂಗ್ ಉಪ–ವಿಭಾಗಕ್ಕೆ ಮಾಹಿತಿಯನ್ನು ನೀಡಿ ಮಂಜೂರಾತಿ ನಕ್ಷೆಯಂತೆ ನಿರ್ಮಿಸುತ್ತಿರುವ ಬಗ್ಗೆ ಪರಿವೀಕ್ಷಣೆಗೆ ಒಳಪಡಿಸತಕ್ಕದ್ದು.
5. ವಿವಿಧ ಇಲಾಖೆಗಳಿಂದ ನೀಡಲಾಗಿರುವ ನಿರಾಕ್ಷೇಪಣಾ ಪತ್ರದಲ್ಲಿ ವಿಧಿಸಲಾಗಿರುವ ಷರತ್ತಿಗಳಿಗೆ ಬದ್ಧರಾಗಿರತಕ್ಕದ್ದು.

6. ನಿವೇಶನದ ಖಾತಾ ವಿಭಜನೆ, ದಾಖಲಾತಿಗಳನ್ನು / ಸ್ವತ್ತಿನ ಹಕ್ಕನ್ನು ಬದಲಾಯಿಸಿದಲ್ಲಿ ಮತ್ತು ಯಾವುದೇ ರೀತಿ ದಾಖಲಾತಿಗಳನ್ನು ಅಥವಾ ವಾಸ್ತವಾಂಶ ಮರೆಮಾಚಿದಲ್ಲಿ ಅರ್ಜಿದಾರರು ನೇರ ಹೊಣೆಯಾಗಿರುತ್ತಾರೆ ಮತ್ತು ನೀಡಲಾದ ಕಟ್ಟಡ ನಕ್ಷೆ ಮಂಜೂರಾತಿಯು ತನ್ನಿಂದತಾನೇ ರದ್ದುಗೊಳ್ಳುತ್ತದೆ.

04/02/2021

ಜಂಟಿ ನಿರ್ದೇಶಕರು (ನಗರ ಯೋಜನೆ –ಉತ್ತರ)
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

2/2/2021 2/2/2021

ಗೆ,

ಶ್ರೀ.ಕೆ.ಶಂಕರ ಮೂರ್ತಿ ಮತ್ತು ಇತರರು, ಖಾತಾದಾರರು,
ಮೆ॥ ಜೈ ಭಾರತಿ ಕನ್‌ಸ್ಟ್ರಕ್ಷನ್ಸ್ ನ ಪರವಾಗಿ ಶ್ರೀ.ವೈಯ್ಯಾಲ ಮುನಿರೆಡ್ಡಿ,
ಹನಿ ಡೀವ್ ಅಪಾರ್ಟ್‌ಮೆಂಟ್ಸ್,
ನೆಲ ಮಹಡಿ, ವೃದ್ಧಾಶ್ರಮದ ಹತ್ತಿರ,
ಹೊರಮಾವು, ಬೆಂಗಳೂರು– 560043.

# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಜಂಟಿ ನಿರ್ದೇಶಕರು (ನಗರ ಯೋಜನೆ – ಉತ್ತರ) ರವರ ಕಛೇರಿ, ಎನ್.ಆರ್.ವೃತ್ತ, ಬೆಂಗಳೂರು –002.

ಸಂಖ್ಯೆ: BBMP/Addl. Dir/ JD NORTH/0066/2019-20 ದಿನಾಂಕ: 7/11/2020

## ಶುಲ್ಕ ಪಾವತಿ ತಿಳುವಳಿಕೆ

ವಿಷಯ: ಆಸ್ತಿ ಖಾತಾ ಸಂಖ್ಯೆ. 05, ಸರ್ವೆ ನಂ. 586, ಕಲ್ಕೆರೆ ಗ್ರಾಮ, ಕೆ.ಆರ್.ಪುರಂ ಹೋಬಳಿ, ಬೆಂಗಳೂರು ಪೂರ್ವ ತಾಲ್ಲೂಕು, ವಾರ್ಡ್ ನಂ. 26, ಮಹದೇವಪುರ ವಲಯ, ಬೆಂಗಳೂರು ಇಲ್ಲಿ ನಿರ್ಮಿಸುತ್ತಿರುವ ವಸತಿ ಸಮುಚ್ಚಯ ಕಟ್ಟಡಕ್ಕೆ ಪ್ರಾರಂಭಿಕ ಪ್ರಮಾಣಪತ್ರ ನೀಡಲು ಶುಲ್ಕ ಪಾವತಿಸುವ ಬಗ್ಗೆ.

ಉಲ್ಲೇಖ: 1) ತಮ್ಮ ಮನವಿ ಪತ್ರ ದಿನಾಂಕ: 09–09–2020
2) ಅಪರ ನಿರ್ದೇಶಕರು (ನಗರ ಯೋಜನೆ) ರವರ ಅನುಮೋದನೆ ದಿನಾಂಕ: 05–11–2020

*******

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಆಸ್ತಿ ಖಾತಾ ಸಂಖ್ಯೆ 05, ಸರ್ವೆ ನಂ. 586, ಕಲ್ಕೆರೆ ಗ್ರಾಮ, ಕೆ.ಆರ್.ಪುರಂ ಹೋಬಳಿ, ಬೆಂಗಳೂರು ಪೂರ್ವ ತಾಲ್ಲೂಕು, ವಾರ್ಡ್ ನಂ. 26, ಮಹದೇವಪುರ ವಲಯ, ಬೆಂಗಳೂರು ಇಲ್ಲಿ ನಿರ್ಮಿಸುತ್ತಿರುವ ವಸತಿ ಸಮುಚ್ಚಯ ಕಟ್ಟಡಕ್ಕೆ ಪ್ರಾರಂಭಿಕ ಪ್ರಮಾಣ ಪತ್ರಕ್ಕಾಗಿ ಉಲ್ಲೇಖ (1) ರಂತೆ ಈ ಕಛೇರಿಗೆ ಮನವಿಯನ್ನು ಸಲ್ಲಿಸಿರುತ್ತೀರಿ. ಪ್ರಾರಂಭಿಕ ಪ್ರಮಾಣಪತ್ರವನ್ನು ನೀಡಲು ಅಪರ ನಿರ್ದೇಶಕರು (ನಗರ ಯೋಜನೆ) ರವರು ಉಲ್ಲೇಖ (2) ರಂದು ಅನುಮೋದನೆ ನೀಡಿರುತ್ತಾರೆ.

ಆದುದರಿಂದ ಪ್ರಾರಂಭಿಕ ಪ್ರಮಾಣಪತ್ರವನ್ನು ನೀಡುವ ಸಂಬಂಧ ದಂಡ ಶುಲ್ಕ ಸೇರಿ ಒಟ್ಟು ರೂ. 2,17,000/– (ಎರಡು ಲಕ್ಷದ ಹದಿನೇಳು ಸಾವಿರ ರೂಪಾಯಿಗಳು ಮಾತ್ರ) ಗಳ ಮೊತ್ತಕ್ಕೆ Commissioner, BBMP A/C JDTP (North) ರವರ ಹೆಸರಿನಲ್ಲಿ ಪಡೆದ ಡಿ.ಡಿ.ಯ ಜೊತೆಗೆ ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿಯಿಂದ ಪಡೆದಿರುವ ನಿರಾಕ್ಷೇಪಣಾ ಪತ್ರವನ್ನು ಈ ಕಛೇರಿಗೆ ಸಲ್ಲಿಸಿದ ನಂತರ ಪ್ರಾರಂಭಿಕ ಪ್ರಮಾಣಪತ್ರ ನೀಡಲು ಕ್ರಮಕೈಗೊಳ್ಳಲಾಗುವುದು ಎಂದು ಈ ಮೂಲಕ ತಮಗೆ ತಿಳಿಸಲಾಗಿದೆ.

10/11/2020

ಜಂಟಿ ನಿರ್ದೇಶಕರು (ನಗರ ಯೋಜನೆ – ಉತ್ತರ)
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ.

7/11 7/11/2020 7/11

ಗೆ.
ಮೆ: ಜೈ ಭಾರತಿ ಕನ್‌ಸ್ಟ್ರಕ್ಷನ್ಸ್,
ಹನಿ ಡೀವ್ ಅಪಾರ್ಟ್‌ಮೆಂಟ್ಸ್,
ನೆಲಮಹಡಿ, ವೃದ್ಧಾಶ್ರಮದ ಹತ್ತಿರ,
ಹೊರಮಾವು, ಬೆಂಗಳೂರು – 560 043.